## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 129 (59) |
| ಸದಸ್ಯರ ಹೆಸರು | : | ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರಿಯ ಪರೀಕ್ಷಾ ಪದ್ಧತಿಯನ್ನು ಜಾರಿಗೊಳಿಸುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ: ಸಲ್ಲಿಸಿದ್ದಲ್ಲಿ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ: | ರಾಜ್ಯದಲ್ಲಿ ಕೇಂದ್ರಿಯ ಪರೀಕ್ಷಾ ಪದ್ಧತಿಯನ್ನು ಜಾರಿಗೊಳಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಆದರೆ ಪ್ರಸ್ತುತ ರಾಜ್ಯ ಪಠ್ಯಕ್ರಮದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಉತ್ತೀರ್ಣತಾ ನಿಯಮವನ್ನು ಸಿಬಿಎಸ್‌ಇ ನಿಯಮದಂತೆ ಪರಿಷ್ಕರಿಸಲು ಕ್ರಮಕೈಗೊಳ್ಳಲಾಗಿದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ:ಇಪಿ 211 ಎಸ್‌ಎಲ್‌ಬಿ 2025 ದಿನಾಂಕ:24.07.2025ರಲ್ಲಿ "ಅಭ್ಯರ್ಥಿಗಳು ಆಂತರಿಕ ಮೌಲ್ಯಮಾಪನ ಮತ್ತು ಬಾಹ್ಯ ಪರೀಕ್ಷೆ ಎರಡೂ ಸೇರಿ ಒಟ್ಟಾರೆ ಸರಾಸರಿ 33% ಅಂಕಗಳನ್ನು ಪಡೆದು, ಒಟ್ಟು 625 ಅಂಕಗಳಿಗೆ ಕನಿಷ್ಠ 206 ಅಂಕಗಳನ್ನು ಗಳಿಸಿದಲ್ಲಿ ಮತ್ತು ಆಯಾ ವಿಷಯದ ಒಟ್ಟು ಅಂಕಗಳಲ್ಲಿ ಕನಿಷ್ಠ 30% ಅಂಕಗಳನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಯನ್ನು ಉತ್ತೀರ್ಣರೆಂದು ಘೋಷಿಸಲಾಗುತ್ತದೆ." ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಕರಡು ನಿಯಮ ತಿದ್ದುಪಡಿಗಾಗಿ ಆಕ್ಷೇಪಣೆ ಅಥವಾ ಸಲಹೆಯನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಿ ರಾಜ್ಯಪತ್ರ ಹೊರಡಿಸಲಾಗಿರುತ್ತದೆ. |
| ಆ) | ಈ ಪದ್ಧತಿಯನ್ನು ಜಾರಿಗೊಳಿಸಿದ್ದಲ್ಲಿ ವಿದ್ಯಾರ್ಥಿಗಳ ಮೇಲೆ ಬೀರುವ ಪರಿಣಾಮಗಳೇನು: ಇದನ್ನು ತಡೆಯಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು; | ಮೇಲಿನ ತಿದ್ದುಪಡಿ ನಿಯಮದಿಂದಾಗಿ ಶೇಕಡಾವಾರು ವಿದ್ಯಾರ್ಥಿಗಳ ಉತ್ತೀರ್ಣತಾ ಮಟ್ಟ ಹೆಚ್ಚಾಗುತ್ತದೆ. |
| ಇ) | ಈ ಪದ್ಧತಿಯನ್ನು ಜಾರಿಗೊಳಿಸಿದರೆ ಸರ್ಕಾರಕ್ಕೆ ಉಂಟಾಗುವ ಆರ್ಥಿಕ ಹೊರೆ ಎಷ್ಟು? | ಮೇಲಿನ ತಿದ್ದುಪಡಿ ನಿಯಮ ಜಾರಿಗೊಳಿಸಿದ್ದಲ್ಲಿ ಯಾವುದೇ ಆರ್ಥಿಕ ಹೊರೆ ಸರ್ಕಾರಕ್ಕೆ ಉಂಟಾಗುವುದಿಲ್ಲ. |

ಸಂಖ್ಯೆ: ಇಪಿ 286 ಎಸ್‌ಎಲ್‌ಬಿ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು